# ಎಸ್. ಎಸ್. ಎಲ್. ಸಿ. ಪೂರ್ವಸಿದ್ಧತಾ ಪರೀಕ್ಷೆ ಪ್ರಶ್ನೋತ್ತರ ಪತ್ರಿಕೆ

## ವಿಷಯ : ಪ್ರಥಮ ಭಾಷೆ ಕನ್ನಡ

**ಅವಧಿ : 3 ಗಂಟೆ 15 ನಿಮಿಷ** **ಗರಿಷ್ಠ ಅಂಕಗಳು : 100**

---

**I.** ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ. **6x1=6**

1. ಪೂದೋಟ – ಪದದಲ್ಲಿರುವ ಸಂಧಿ :
ಎ) ಯಣ್ ಸಂಧಿ ಬಿ) ಶ್ಚುತ್ವಸಂಧಿ ಸಿ) ಜಶ್ತ್ವಸಂಧಿ ಡಿ) ಆದೇಶ ಸಂಧಿ

2. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅಂಥ ವಾಕ್ಯವನ್ನು ಹೀಗೆ ಕರೆಯುವರು.
ಎ) ಸಾಮಾನ್ಯವಾಕ್ಯ ಬಿ) ಪ್ರಶ್ನಾರ್ಥಕವಾಕ್ಯ ಸಿ) ಮಿಶ್ರವಾಕ್ಯ ಡಿ) ಸಂಯೋಜಿತವಾಕ್ಯ

3. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಈ ಚಿಹ್ನೆಯನ್ನು ಬಳಸಲಾಗುತ್ತದೆ.
ಎ) ಅಲ್ಪವಿರಾಮ ಬಿ) ಆವರಣ ಸಿ) ಉದ್ಧರಣ ಡಿ) ಭಾವಸೂಚಕ

4. 'ಬಿಲ್ಗೊಂಡು' ಇದು ಈ ಸಮಾಸಕ್ಕೆ ಉದಾಹರಣೆಯಾಗಿದೆ.
ಎ) ಬಹುವ್ರೀಹಿ ಸಮಾಸ ಬಿ) ತತ್ಪುರುಷ ಸಮಾಸ ಸಿ) ದ್ವಂದ್ವ ಸಮಾಸ ಡಿ) ಕ್ರಿಯಾ ಸಮಾಸ

5. 'ಬಂದಾನು' ಪದವು ಈ ಕ್ರಿಯಾರೂಪಕ್ಕೆ ಉದಾಹರಣೆಯಾಗಿದೆ;
ಎ) ವಿಧ್ಯರ್ಥಕ ಬಿ) ಸಂಭಾವನಾರ್ಥಕ ಸಿ) ನಿಷೇಧಾರ್ಥಕ ಡಿ) ಪ್ರಶ್ನಾರ್ಥಕ

6. 'ಅವನೇ' ಪದವು ಅವ್ಯಯದ ಈ ವ್ಯಾಕರಣಾಂಶಕ್ಕೆ ಸೇರಿದೆ;
ಎ) ಸಾಮಾನ್ಯಾರ್ಥಕಾವ್ಯಯ ಬಿ) ಕ್ರಿಯಾರ್ಥಕಾವ್ಯಯ ಸಿ) ಅವಧಾರಣಾರ್ಥಕಾವ್ಯಯ ಡಿ) ಸಂಬಂಧಾರ್ಥಕಾವ್ಯಯ

**II.** ಕೆಳಗಿನ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ. **4x1=4**

7. ವ್ಯಾಪಾರಿ : ಬೇಹಾರಿ : : ಪ್ರಸಾದ : ________ ಹಸಾದ
8. ನಲ್ಮೆ : ಪ್ರೀತಿ : : ಕೃತ್ರಿಮ : ________ ಮೋಸ
9. ಕೂರ್ಮೆ : ಸ್ನೇಹ : : ಪರದು : ________ ವ್ಯಾಪಾರ
10. ಸತಿಪತಿ : ಜೋಡುನುಡಿ : : ಮೊತ್ತಮೊದಲು : ______ ದ್ವಿರುಕ್ತಿ

**III.** ಕೆಳಗಿನ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ. **7x1=7**

**11.** ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು?
ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಶಬರಿ.

**12.** ಸುಕುಮಾರಸ್ವಾಮಿಗೆ ಯಾವ ಪಟ್ಟವನ್ನು ಕಟ್ಟಲಾಯಿತು
ಸುಕುಮಾರ ಸ್ವಾಮಿಗೆ ಸೆಟ್ಟಿಯ ಪಟ್ಟವನ್ನು ಕಟ್ಟಲಾಯಿತು.

**13.** ಗಡಿ ಪ್ರದೇಶದಲ್ಲಿ 'ಬ್ಲಾಕ್‌ಔಟ್' ನಿಯಮವನ್ನು ಏಕೆ ಪಾಲಿಸಲಾಗುತ್ತದೆ?
ಗಡಿ ಪ್ರದೇಶದಲ್ಲಿ ವಿಮಾನ ದಾಳಿಯಿಂದ ರಕ್ಷಿಸಿಕೊಳ್ಳಲು; 'ಬ್ಲಾಕ್ ಔಟ್' ನಿಯಮವನ್ನು ಪಾಲಿಸಲಾಗುತ್ತದೆ.

**14.** ಧರ್ಮಾಧಿಕರಣರು ಏಕೆ ವಿಸ್ಮಯ ಹೊಂದಿದರು?
ಹಣವನ್ನು ಹೂತುಹಾಕಿದ್ದ ಸ್ಥಳದಲ್ಲಿ ಇದ್ದ ಆಲದ ಮರವೇ ಅದಕ್ಕೆ ಸಾಕ್ಷಿ" ಎಂದು ಹೇಳಿದ್ದನ್ನು ಕೇಳಿ ಧರ್ಮಾಧಿಕರಣರು ವಿಸ್ಮಯ ಹೊಂದಿದರು.

**15.** ಕವಿ ಕುವೆಂಪು ಅವರು ನೋಡಿದ ಅಡಕೆಯ ತೋಟ ಎಲ್ಲಿದೆ?
ಕವಿಯು ನೋಡಿದ ಅಡಕೆಯ ತೋಟ ವನದಂಚಿನಲ್ಲಿದೆ.

**16.** ಲವನು ಕುದುರೆಯನ್ನು ಯಾವುದರಿಂದ ಕಟ್ಟಿದನು?
ಕುದುರೆಯನ್ನು ಲವನು ತನ್ನ ಉತ್ತರೀಯದಿಂದ ಕಟ್ಟಿದನು.

**17.** 'ಕರ್ಪೂರಕ್ಕೆ ಸಂಪೂರ್ಣ ಬಹಿಷ್ಕಾರ ಹಾಕಬೇಕು' ಎಂದು ಲೇಖಕರು ಹೇಳಲು ಪ್ರಮುಖ ಕಾರಣವೇನು?
ಕರ್ಪೂರವು ವಿದೇಶದಿಂದ ಆಮದಾಗುತ್ತಿದ್ದು ದರಿಂದ ವಿದೇಶಿ ವಸ್ತುಗಳನ್ನು ಬಹಿಷ್ಕರಿಸಬೇಕೆಂದು ಲೇಖಕರು ಈ ಮಾತನ್ನು ಹೇಳಿದ್ದಾರೆ

**IV.** ಕೆಳಗಿನ ಪ್ರಶ್ನೆಗಳಿಗೆ ಮೂರು ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ. **10x2=20**

**18.** ವೂಲವರ್ಥ ಅಂಗಡಿಯಲ್ಲಿ ಸಿಕ್ಕುವ ವಸ್ತುಗಳು ಯಾವುವು?
ವೂಲವರ್ಥ ಅಂಗಡಿಯಲ್ಲಿ ಸಿಗುವ ವಸ್ತುಗಳೆಂದರೆ ಬೂಟು, ಕಾಲು ಚೀಲ, ಸಾಬೂನು, ಔಷಧ, ಪುಸ್ತಕ, ಅಡಿಗೆ ಪಾತ್ರೆಗಳು, ಇಲೆಕ್ಟ್ರಿಕ್ ದೀಪದ ಸಾಮಾನುಗಳು, ಫೋಟೋ, ಅಡವಿಯ ಹೂ, ಯುದ್ಧ ಸಾಮಾಗ್ರಿ ಮುಂತಾದ ಎಲ್ಲವೂ ದೊರೆಯುತ್ತವೆ.

**19.** ಗುರೂಪದೇಶದ ಗುಣಗಳನ್ನು ಪಟ್ಟಿ ಮಾಡಿ.
ಸಜ್ಜನರಿಗೆ ಗುರುವಚನ ಎನ್ನುವುದು ಕಿವಿಗೆ ಒಂದು ಆಭರಣ. ಅದರಿಂದ ಅವರ ಶ್ರೀಮುಖ ಇನ್ನಷ್ಟು ಶ್ರೀಮಂತವಾಗುತ್ತದೆ. ಮುಸ್ಸಂಜೆಯಕತ್ತಲನ್ನು ಚಂದ್ರ ಕಳೆವಂತೆ ಬಗೆಬಗೆಯ ಕೊಳೆಯನ್ನೆಲ್ಲ ಹಿತವಚನಗಳು ತೊಳೆದುಬಿಡುತ್ತವೆ. ಆಗ ಬಾಳಿನಲ್ಲಿ ಸಂಯಮ, ಪಕ್ವತೆ, ಶಾಂತಿ ಮುಂತಾದವು ಕಾಣಿಸಿಕೊಳ್ಳುತ್ತವೆ.
ಗುರೂಪದೇಶವೆಂದರೆ ಜನರ ಒಳ ಹೊರ ಕೊಳೆಗಳನ್ನು ತೊಳೆದುಬಿಡುವ ನೀರಿಲ್ಲದ ಸ್ನಾನ (ತಲೆ ನೆರೆಯದ, ಮೈ, ಸುಕ್ಕುಗಟ್ಟದೆ ಮೂಡುವ ಮುಪ್ಪು: ಬೊಜ್ಜು ಬೆಳೆಯದೆ ಬರುವ ಗುರುತ್ವ: ಬಂಗಾರವಿಲ್ಲದೆ ಮಾಡಿ ಬೆಲೆಬಾಳುವ ಕಿವಿಯೋಲೆ: ಪಂಜು ಇಲ್ಲದೆ ಬೆಳಗುವ ಬೆಳಕು: ಉದ್ವೇಗ ಬರಿಸದ ಜಾಗರಣೆಯಾಗಿದೆ.)

**20.** ಅರಸ ವೃಷಭಾಂಕನು ಆಶ್ಚರ್ಯಗೊಳ್ಳಲು ಕಾರಣವೇನು?
ಒಮ್ಮೆ ಒಬ್ಬ ವರ್ತಕನು ಲಕ್ಷದೀನಾರ( ಚಿನ್ನದ ನಾಣ್ಯ) ಬೆಲೆಬಾಳುವ ರತ್ನಗಂಬಳಿಗಳನ್ನು ಮಾರಲು ಉಜ್ಜಯನಿಗೆ ತೆಗೆದುಕೊಂಡು ಬಂದಿದ್ದಾಗ ಆ ಪಟ್ಟಣವನ್ನಾಳುವ ವೃಷಭಾಂಕನೆಂಬ ರಾಜ ಮತ್ತು ಮಹಾರಾಣಿ ಅವುಗಳ ಬೆಲೆ ಹೆಚ್ಚಾಯಿತೆಂದು ಕ್ರಯಕ್ಕೆ ಕೊಳ್ಳಲಿಲ್ಲ. ಆದರೆ ಸುಕುಮಾರ ಸ್ವಾಮಿಯ ತಾಯಿ ಅಷ್ಟು ಬೆಲೆಕೊಟ್ಟು

ಖರೀದಿಸಿ ಅವುಗಳನ್ನು ಮೂವತ್ತೆರಡು ತುಂಡುಗಳನ್ನಾಗಿ ಮಾಡಿ ಸೊಸೆಯಂದಿರಿಗೆ ಪಾದುಕೆಗಳಿಗೆ ಸಿಕ್ಕಿಸಿಕೊಳ್ಳಲು ಕೊಟ್ಟಳು. ಈ ಸಂಗತಿಯಿಂದ ರಾಜನು ಆಶ್ಚರ್ಯಪಟ್ಟನು.

21. ಧರ್ಮಾಧಿಕರಣರು ವಟವೃಕ್ಷಕ್ಕೆ ಏನು ಹೇಳಿದರು?

ಧರ್ಮಾಧಿಕರಣರು ವಟವೃಕ್ಷಕ್ಕೆ "ನೀನಾದರೋ ಯಕ್ಷಾದಿ ದಿವ್ಯ ದೇವತೆಗಳು ವಾಸ ಮಾಡುವಂತಹ ಮತ್ತು ಅವರ ಸೇವೆಯನ್ನು ಮಾಡುವಂತಹವನು ಆಗಿದ್ದೀಯಾ, ಆ ಕಾರಣದಿಂದ ನಿನ್ನನ್ನು ಸಾಕ್ಷಿ ಮಾಡಿ ಕೇಳುತ್ತಿದ್ದೇವೆ, ನೀನು ತಪ್ಪದೆ ಸಾಕ್ಷಿಯನ್ನು ನುಡಿ" ಎಂದು ಹೇಳಿದರು.

22. ಹಲಗಲಿಗೆ ದಂಡು ಬರಲು ಕಾರಣವೇನು?

ಹಲಗಲಿಯ ಬೇಡರಾದ ಪೂಜೇರಿ ಹನುಮ, ಬ್ಯಾಡರ ಬಾಲ, ರಾಮ, ಜಡಗ ಇವರುಗಳು ಬ್ರಿಟಿಷ್ ಸರ್ಕಾರ ಹೊರಡಿಸಿದ್ದ ನಿಶ್ಶಸ್ತ್ರೀಕರಣದ ಆದೇಶವನ್ನು ವಿರೋಧಿಸಿ ತಮ್ಮಲ್ಲಿರುವ ಆಯುಧಗಳನ್ನು ಕೊಡಲು ಒಪ್ಪದೆ ದಂಗೆ ಎದ್ದರು. ಈ ದಂಗೆಯನ್ನು ಹತ್ತಿಕ್ಕಲು ಬಂದ ಕಾರಕೂನನ ಕಪಾಳಕ್ಕೆ ಹೊಡೆದು ಸಿಪಾಯಿಗಳನ್ನು ಹೊಡೆದುರುಳಿಸಿದರು ಇದರಿಂದ ಕೋಪಗೊಂಡ ಕುಂಪಣಿ ಸರ್ಕಾರದ ಅಧಿಕಾರಿಗಳು ಹಲಗಲಿಯ ಬೇಡರ ದಂಗೆಯನ್ನು ಬಗ್ಗುಬಡಿಯಲು ದಂಡನ್ನು ಕರೆಯಿಸಿದರು.

23 ವಾಲ್ಮೀಕಿ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ವಿವರಿಸಿ.

ಶ್ರೀರಾಮನು ಮಹರ್ಷಿಗಳ ಆದೇಶದಂತೆ ಅಶ್ವಮೇಧ ಯಾಗವನ್ನು ಕೈಗೊಂಡು, ಶತ್ರುಘ್ನನ ಬೆಂಗಾವಲಿನಲ್ಲಿ ಯಜ್ಞಾಶ್ವವನ್ನು ಕಳುಹಿಸಿದನು. ರಾಮನ ಆಜ್ಞೆಯಂತೆ ಹೊರಟ ಯಜ್ಞಾಶ್ವವನ್ನು ಭುಜಬಲ ಪರಾಕ್ರಮಿಗಳಾದ ರಾಜರುಗಳು ತಡೆಯಲು ಹೆದರಿ ನಮಸ್ಕರಿಸಿ ಮುಂದೆ ಹೋಗಲು ಬಿಟ್ಟರು. ಹೀಗೆ ಯಜ್ಞಾಶ್ವವು ಭೂಮಿಯಲ್ಲೆಲ್ಲ ಸಂಚರಿಸುತ್ತ ವಾಲ್ಮೀಕಿಯ ಆಶ್ರಮದ ತೋಟದ ಹಸುರಾದ ಹುಲ್ಲನ್ನು ತಿನ್ನಲು ಒಳಹೊಕ್ಕಿತು.

24. 'ಅನ್‌ಟು ದಿಸ್ ಲಾಸ್ಟ್' ಕೃತಿ ಗಾಂಧೀಜಿಯವರ ಮೇಲೆ ಯಾವ ಪರಿಣಾಮ ಬೀರಿತು?

"ಅನ್‌ಟು ದಿಸ್ ಲಾಸ್ಟ್" ಗ್ರಂಥದ ಸಿದ್ಧಾಂತಗಳನ್ನು ನಾನು ಹೀಗೆ ತಿಳಿದೆ.

1. ಎಲ್ಲರ ಒಳ್ಳೆಯದರಲ್ಲಿಯೇ ನಮ್ಮ ಒಳ್ಳೆಯದು ಅಡಗಿದೆ.
2. ವಕೀಲನ ಕೆಲಸಕ್ಕೆ ಇರುವ ಬೆಲೆಯೇ ಕ್ಷೌರಿಕನ ಕೆಲಸಕ್ಕೂ ಇದೆ. ತಮ್ಮ ಕೆಲಸದಿಂದ ಜೀವನ ನಿರ್ವಹಿಸಲು ಎಲ್ಲರಿಗೂ ಸಮಾನವಾದ ಹಕ್ಕಿದೆ.
3. ಶ್ರಮ ಜೀವಿಯ ಜೀವನ, ಉಳುವವನ ಅಥವ ಕೈಕಸುಬುಗಾರನ ಜೀವನವೇ ಯೋಗ್ಯ ಜೀವನ.

25. ನಾರಾಯಣಗುರು ಅವರ ಧರ್ಮಪರಿಪಾಲನಾ ಯೋಗಂ ಸಂಘಟನೆಯ ಕೊಡುಗೆಗಳನ್ನು ತಿಳಿಸಿ.

ಶ್ರೀನಾರಾಯಣಗುರು ಅವರು ತಮ್ಮ ಧರ್ಮಪರಿಪಾಲನಾ ಯೋಗಂ ಮೂಲಕ ಸಾಮಾಜಿಕ ಪ್ರತಿರೋಧದ ಚಳವಳಿಗಳನ್ನು ಪ್ರಾರಂಭಿಸಿದರು. ಮನುಷ್ಯ ಘನತೆಯಿಂದ ಬದುಕುವ ಸಮಾಜದ ನಿರ್ಮಾಣವೇ ಈ ಸಂಘಟನೆಯ ಉದ್ದೇಶವಾಗಿತ್ತು. ನಾರಾಯಣಗುರು ಅವರ ಪ್ರಮುಖ ಆಶಯ ಮಾನವ ಕುಲಕ್ಕೆ ಒಂದೇ ಜಾತಿ, ಒಂದೇ ಧರ್ಮ ಮತ್ತು ಒಬ್ಬನೇ ದೇವರು (One Caste, One Religion and One God for Man) ಎಂಬುದು. ಇದನ್ನು ಸಾಧಿಸಲು ಶಿಕ್ಷಣವೇ ಮಾರ್ಗವೆಂದು ಸಾರಿದರು. ಕೆಳಸಮುದಾಯಗಳ ಪ್ರವೇಶ ನಿರಾಕರಿಸುತ್ತಿದ್ದ ದೇವಾಲಯಗಳಿಗೆ ಪರ್ಯಾಯ ದೇವಾಲಯಗಳನ್ನು ಕಟ್ಟಿದರು.

26. ಭಗತ್‌ಸಿಂಗ್, ಜಲಿಯನ್ ವಾಲಾಬಾಗ್‌ನ ಮಣ್ಣಿನ ಕುರಿತು ತನ್ನ ತಂಗಿಗೆ ಏನೆಂದು ಹೇಳುತ್ತಾನೆ?

ಅವನ ಸಹೋದರಿ ಎಂದಿನಂತೆ ಅವನನ್ನು ಊಟಕ್ಕೆಬ್ಬಿಸಿದರೆ ಒಲ್ಲೆನೆಂದು ಮುಖ ತಿರುಗಿಸಿದ. ಅವನಿಗೆ ಪ್ರಿಯವಾದ ಮಾವಿನ ಹಣ್ಣೊಂದನ್ನು ಕೂಡ ನಿರಾಕರಿಸಿ, ಅವಳನ್ನು ಮನೆಯ ಹಿಂಭಾಗಕ್ಕೆ ಕರೆದೊಯ್ದು, ತನ್ನ

ಡಬ್ಬಿಯಲ್ಲಿದ್ದ ಮಣ್ಣನ್ನು ತೋರಿಸಿದ. ರಕ್ತದಲ್ಲಿ ಕಲೆಸಿದಂತಿದ್ದ ಆ ಮಣ್ಣು ಎಲ್ಲಿಯದೆಂದು ತಿಳಿದಾಗ ಅವನ ಉಪವಾಸಕ್ಕೆ ಕಾರಣ ಅವಳಿಗೆ ಗೊತ್ತಾಯಿತು. **'ತ್ಯಾಗದ ಪ್ರತೀಕ ಆ ಮಣ್ಣು'** ಎಂದವಳಿಗೆ ತಿಳಿಯ ಹೇಳಿದ.

**27. 'ವಸಂತ ಮುಖ ತೋರಲಿಲ್ಲ' ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ**

**ಮಾವಿನ ಮರಗಳು ಮೈದುಂಬಿ ನಿಂತಿವೆ.**
**ಹಕ್ಕಿಗಳು ರೆಕ್ಕೆ ಬಿಚ್ಚಿ ಹಾರಾಡುತ್ತಿವೆ.**
**ಕೋಗಿಲೆಗಳು ಮನದುಂಬಿ ಇಂಪಾಗಿ ಹಾಡುತ್ತಿವೆ.**
**ಕಡಲು ಉಕ್ಕಿ ಹರಿಯುತ್ತಿದೆ.**
**ಮಲ್ಲಿಗೆ ಹೂವು ಮುಗುಳು ನಗೆ ಬೀರಿದೆ.**
**ಹೊಳೆಯುವ ರಂಗೋಲಿಯಲ್ಲಿ ಬಾಲರವಿ ಥಳಥಳಿಸುತ್ತಿದ್ದಾನೆ ಈ ರೀತಿ ಪ್ರಕೃತಿಯ ಸಂಬ್ರಮ ವ್ಯಕ್ತವಾಗಿದೆ**

**V. ಕೆಳಗಿನ ಕವಿ/ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2x3=6**

**28. ಪು.ತಿ.ನ.**

**ಪು.ತಿ.ನ ರವರು ಕ್ರಿ.ಶ.1905ರಲ್ಲಿ ಮಂಡ್ಯ ಜಿಲ್ಲೆಯ ಮೇಲುಕೋಟೆಯಲ್ಲಿ ಜನಿಸಿದರು. ಶ್ರೀಯುತರು ರಚಿಸಿರುವ ಕೃತಿಗಳೆಂದರೆ ಶಬರಿ, ಅಹಲ್ಯೆ, ಗೋಕುಲ ನಿರ್ಗಮನ, ವಿಕಟವಿಜಯ ಮುಂತಾದವು ಪ್ರಮುಖ ಕೃತಿಗಳು.ಶ್ರೀಯುತರಿಗೆ ಶ್ರೀಯುತರಿಗೆ 'ಪಂಪ ಪ್ರಶಸ್ತಿ' ಮತ್ತು ಕೇಂದ್ರ ಹಾಗೂ ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗಿದೆ.**

**29. ರನ್ನ**

**ರನ್ನನು ಕ್ರಿ ಶ ಸುಮಾರು 949ರಲ್ಲಿ (ಹತ್ತನೆಯ ಶತಮಾನದಲ್ಲಿ) ಬಾಗಲಕೋಟೆ ಜಿಲ್ಲೆಯ ಮುದುವೊಳಲು ಎಂಬ ಗ್ರಾಮದಲ್ಲಿ ಜನಿಸಿದನು. ಇವನು "ಸಾಹಸ ಬೀಮ ವಿಜಯಂ"(ಗದಾಯುದ್ದ) ಅಜಿತ ತೀರ್ಥಂಕರ ಪುರಾಣ ತಿಲಕಂ. ಪರಶುರಾಮ ಚರಿತಂ, ಚಕ್ರೇಶ್ವರ ಚರಿತಂ ಎಂಬ ಕಾವ್ಯಗಳನ್ನು ಬರೆದಿದ್ದಾನೆ. ಇವನಿಗೆ ತೈಲಪನು ಕವಿ ಚಕ್ರವರ್ತಿ ಎಂಬ ಬಿರುದನ್ನು ಕೊಟ್ಟನು. ಈತನು ರತ್ನತ್ರಯರಲ್ಲಿ ಒಬ್ಬನು.**

**VI. ಕೆಳಗಿನ ಪದ್ಯ ಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗಿಸಿ, ಛಂದಸ್ಸಿನ ಹೆಸರನ್ನು ಬರೆಯಿರಿ. 1x3=3**

**30. ಖಳನೊಳವಿಂಗೆ ಕುಪ್ಪೆ ವರಮೆಂಬವೊಲಾಂಬರಮುಂಟೆ ನಿನ್ನದೊಂ**

| | | | | | | |
|---|---|---|---|---|---|---|
| ನ | ಜ | ಭ | ಜ | ಜ | ಜ | ರ |
| ∪∪∪ | ∪— ∪ | — ∪∪ | ∪— ∪ | ∪— ∪ | ∪— ∪ | — ∪— |
| ಖಳನೋ | ಳವಿಂಗೆ | ಕುಪ್ಪೆವ | ರಮೆಂಬ | ವೊಲಾಂಬ | ರಮುಂಟೆ | ನಿನ್ನದೊಂ |

ಇದು ಚಂಪಕಮಾಲಾವೃತ್ತ ಛಂದಸ್ಸಿಗೆ ಸೇರುತ್ತದೆ.

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿರಿ. 1x3=3**

**31. 'ಮಾರಿಗೌತಣವಾಯ್ತು ನಾಳಿನ ಭಾರತವು'**

ಅಲಂಕಾರ :– ರೂಪಕಾಲಂಕಾರ

ಲಕ್ಷಣ :–ಉಪಮೇಯ ಮತ್ತು ಉಪಮಾನಗಳಿಗೆ ಭೇದವು ಕಂಡುಬರದೆ ಅವೆರಡೂ ಒಂದೇ ಎಂದು ವರ್ಣಿಸಿದರೆ ಅದೇ 'ರೂಪಕಾಲಂಕಾರ'.

ಉಪಮೇಯ :–ನಾಳಿನ ಭಾರತ ಯುದ್ಧ

ಉಪಮಾನ :–ಮಾರಿಯ ಔತಣ

ಸಮನ್ವಯ :–ಇಲ್ಲಿ ಉಪಮೇಯವಾದ ನಾಳಿನ ಭಾರತ ಯುದ್ಧವನ್ನು ಉಪಮಾನವಾದ ಮಾರಿಯ ಔತಣಕ್ಕೆ ಅಭೇದವಾಗಿ ವರ್ಣಿಸಿರುವುದರಿಂದ ಇದು ರೂಪಕಾಲಂಕಾರ.

**VIII.** ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.1x3=3

32. ಆಳಾಗಬಲ್ಲವನು; ಅರಸಾಗಬಲ್ಲನು. ಅಥವಾ

ಮಾತೇ ಮುತ್ತು; ಮಾತೇ ಮೃತ್ಯು

ಗಾದೆ ವೇದಕ್ಕೆ ಸಮಾನ, ವೇದ ಸುಳ್ಳಾದರೂ ಗಾದೆ ಸುಳ್ಳಾಗುವುದಿಲ್ಲ. ಗಾದೆಗಳು ವೇದದ ತಲೆದಿಂಬು ಇದ್ದಹಾಗೆ. ಗಾದೆ ಹಿರಿಯರು ಹೇಳಿದ ಅನುಭವದ ನುಡಿಮುತ್ತುಗಳು. ಬಿಂದುವಿನಂತಹ ಗಾದೆಯಲ್ಲಿ ಸಿಂಧುವಿನಂತಹ ವಿಶಾಲ ಅರ್ಥವು ಅಡಗಿರುತ್ತದೆ. ಅಂತಹ ಮಹತ್ವದ ಗಾದೆಗಳಲ್ಲಿ ಮಾತೇ ಮುತ್ತು: ಮಾತೆ ಮೃತ್ಯು' ಎಂಬ ಗಾದೆಯೂ ಒಂದಾಗಿದೆ.

ಈ ಗಾದೆಯಂತೆ ಮುತ್ತು ಆಕರ್ಷಕವಾದ, ತುಂಬಾ ಬೆಲೆಯುಳ್ಳ ಹಾಗು ಮನಸ್ಸಿಗೆ ಮುದವನ್ನುಮಟು ಮಾಡುವ ವಸ್ತುವಾಗಿದೆ.ಅಂತೆಯೇ ನಮ್ಮ ಮಾತುಕೂಡ ಆಕರ್ಷಕವಾಗಿರಬೇಕೆ ಎನ್ನುವ ಮಾತಿನ ಮಹತ್ವವನ್ನು ತಿಳಿಸುತ್ತದೆ. ನಮ್ಮ ಮಾತು ನಮ್ಮ ವ್ಯಕ್ತಿತ್ವದ ಕನ್ನಡಿಯಾಗಿದೆ. ಮಾತು ಬೆಳ್ಳಿ, ಮೌನ ಬಂಗಾರ, ಮಾತು ಆಡಿದರೆ ಹೋಯಿತು, ಮುತ್ತು ಹೊಡೆದರೆ ಹೋಯಿತು, "ಮಾತು ಬಲ್ಲವ ಮಾಣಿಕ್ಯ ತಂದ, ಮಾತರಿಯದವ ಜಗಳ ತಂದ, ಎಂಬ ಗಾದೆ ಮಾತುಗಳು ಕೂಡ ಮಾತಿನ ಮಹತ್ವವನ್ನು ತಿಳಿಸುತ್ತದೆ.

**IX.** ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. **6x3=18**

33. "ಹೊತ್ತು! ಹೊತ್ತು! ಹೊತ್ತೇ ಹಣ"

ಆಯ್ಕೆ :– ಈ ವಾಕ್ಯವನ್ನು ವಿ.ಕೃ.ಗೋಕಾಕ್ ಅವರ ಸಮುದ್ರದಾಚೆಯಿಂದ' ಎಂಬ ಪ್ರವಾಸ ಕಥನದಿಂದ ಆರಿಸಲಾಗಿರುವ 'ಲಂಡನ್ ನಗರ' ಎಂಬ ಗದ್ಯಪಾಠದಿಂದ ತೆಗೆದುಕೊಳ್ಳಲಾಗಿದೆ.

ಸಂದರ್ಭ:– ಲಂಡನ್ ನಗರದ ಬೀದಿಯಲ್ಲಿ ಲಕ್ಷಾಂತರ ಜನರು ಅವಸರದಿಂದ ಓಡಾಡುವುದನ್ನು ನೋಡಿ ಲೇಖಕರು ಈ ಮಾತನ್ನು ಹೇಳಿದ್ದಾರೆ.

ಸ್ವಾರಸ್ಯ :– ಇಲ್ಲಿ ಸಮಯಕ್ಕೆ ಬಹಳ ಪ್ರಾಮುಖ್ಯತೆ ಇದೆ, ಅದರಲ್ಲೂ ವಿದೇಶಗಳಲ್ಲಿ ಸಮಯವೇ ಹಣ ಎಂಬ ಮಾತು ಅಕ್ಷರಸಹ ನಿಜವಾಗಿದೆ ಎಂಬ ಮಾತು ಸ್ವಾರಸ್ಯಪೂರ್ಣವಾಗಿದೆ.

34. "ದುಡ್ಡು ದುರಭಿಮಾನದ ತವರು"

ಆಯ್ಕೆ:– ಈ ವಾಕ್ಯವನ್ನು ಡಾ. ಬನ್ನಂಜೆ ಗೋವಿಂದಾಚಾರ್ಯರವರು ಬರೆದಿರುವ ಕಾದಂಬರಿ ಎಂಬ ಕೃತಿಯಿಂದ ಆರಿಸಲಾಗಿರುವ ಶುಕನಾಸನ ಉಪದೇಶ ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ ಇದು ಬಾಣಭಟ್ಟನು ಸಂಸ್ಕೃತದಲ್ಲಿ ಬರೆದ ಅದೇ ಹೆಸರಿನ ಕೃತಿಯ ಅನುವಾದ.

ಸಂದರ್ಭ:– ಪಟ್ಟಾಭಿಷೇಕೋತ್ಸವಕ್ಕೆ ಪೂರ್ವಭಾವಿಯಾಗಿ, ಮಹಾಮಂತ್ರಿಯಾದ ಶುಕನಾಸನನ್ನು ಸಂದರ್ಶಿಸಲು, ರಾಜಪುತ್ರ ಚಂದ್ರಾಪೀಡನು ಬಂದ ಸಂದರ್ಭದಲ್ಲಿ ಓರ್ವ ಜವಾಬ್ದಾರಿಯುತ ಪ್ರಧಾನಮಂತ್ರಿಯಾಗಿ ಮುಂದಕ್ಕೆ ಯುವರಾಜ ಪಟ್ಟವೇರಲಿರುವ ರಾಜಕುಮಾರನಿಗೆ ದುಡ್ಡಿನ ಮಹಿಮೆಯನ್ನು ತಿಳಿಸುವ ಸಂದರ್ಭದಲ್ಲಿ ಶುಕನಾಸನರು ಈ ಮಾತನ್ನು ಹೇಳುತ್ತಾರೆ.

ಸ್ವಾರಸ್ಯ:– ಶುಕನಾಸನರು ಯುವರಾಜ ಪಟ್ಟವೇರಲಿರುವ ರಾಜಕುಮಾರನಿಗೆ, ದುಡ್ಡಿನ ಮಹಿಮೆ ಹಾಗೂ ಅದರಿಂದ ಆಗುವ ಅನಾಹುತಗಳನ್ನು ಉಪದೇಶಿಸಿರುವುದು ಸ್ವಾರಸ್ಯ ಪೂರ್ಣವಾಗಿದೆ.

35. “ನಾನಾಕೆಯನ್ನು ಪರೀಕ್ಷಿಸುವೆ, ಬಿಸಿನೀರು ಸಿದ್ಧಪಡಿಸಿ.”
ಆಯ್ಕೆ:– ಈ ವಾಕ್ಯವನ್ನು ಸಾರಾ ಅಬೂಬಕ್ಕರ್ ಅವರು ರಚಿಸಿರುವ ‘ಚಪ್ಪಲಿಗಳು’ಕಥಾ ಸಂಕಲನದಿಂದ ಆರಿಸಲಾಗಿರುವ ‘ಯುದ್ಧ’ಎಂಬ ಗದ್ಯಪಾಠದಿಂದ ಆರಿಸಲಾಗಿದೆ.
ಸಂದರ್ಭ:– ಮುದುಕಿಯು “ನನ್ನ ಸೊಸೆಯು ಹೆರಿಗೆಯ ಬೇನೆಯನ್ನು ತಿನ್ನುತ್ತಿದ್ದಾಳೆ,ಸಂಜೆಯಿಂದಲೇ ನೋವು ಪ್ರಾರಂಭವಾಗಿದೆ, ಡಾಕ್ಟರನ್ನೋ ಸೂಲಗಿತ್ತಿಯನ್ನೋ ಕರೆಯೋಣವೆಂದರೆ ಈ ಬಾಂಬುಗಳು, ‘ಬ್ಲಾಕ್ ಔಟ್’ ಎಂದು ಹೇಳಿದ ಸಂದರ್ಭದಲ್ಲಿ ಕಾಲಿಗೆ ಪೆಟ್ಟಾಗಿದ್ದ ಡಾಕ್ಟರ್ ರಾಹಿಲನು ಮೇಲಿನಂತೆ ಹೇಳುತ್ತಾನೆ.
ಸ್ವಾರಸ್ಯ:–ತನ್ನ ಕಾಲಿಗೆ ಪೆಟ್ಟಾಗಿದ್ದರೂ ಅದನ್ನು ಲೆಕ್ಕಿಸದೆ ಮುದುಕಿಯ ಸೊಸೆಗೆ ಹೆರಿಗೆ ಮಾಡಿಸಲು ಮುಂದಾಗುವ ರಾಹಿಲನ ವೃತ್ತಿ ಧರ್ಮ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

36. “ಹೊಡೆದರೋ ಗುಂಡ ಕರುಣೆ ಇಲ್ಲದ್ದಾಂಗ”
ಆಯ್ಕೆ :– ಈ ವಾಕ್ಯವನ್ನು ಡಾ।ಬಿ.ಎಸ್.ಗದ್ದಗಿಮಠ ಅವರು ಸಂಪಾದಿಸಿರುವ ಕನ್ನಡ ಜನಪದ ಗೀತೆಗಳು ಕೃತಿಯಿಂದ ಆಯ್ದ ‘ಹಲಗಲಿ ಬೇಡರು’ ಎಂಬ ಲಾವಣಿಯಿಂದ ಆರಿಸಲಾಗಿದೆ.
ಸಂದರ್ಭ :– ಬ್ರಿಟಿಷ್ ದಂಡು ಹಲಗಲಿ ಜನರ ಮೇಲೆ ಮನಬಂದಂತೆ ಗುಂಡು ಹಾರಿಸಿತು ಎಂದು ಹೇಳುವ ಸಂದರ್ಭದಲ್ಲಿ ಈ ಮಾತು ಬಂದಿದೆ.
ಸ್ವಾರಸ್ಯ :– ಬ್ರಿಟೀಷರ ಕ್ರೂರತನವನ್ನು ಸ್ವಾರಸ್ಯವಾಗಿ ವರ್ಣಿಸಲಾಗಿದೆ.

37. “ಹಸುರಾದುದು ಕವಿಯಾತ್ಮಂ”
ಆಯ್ಕೆ:– ಈ ವಾಕ್ಯವನ್ನು ಕುವೆಂಪು ಅವರ ಪಕ್ಷಿಕಾಶಿ ಕವನ ಸಂಕಲನದಿಂದ ಆರಿಸಲಾಗಿರುವ “ಹಸುರು” ಎಂಬ ಪದ್ಯದಿಂದ ಆರಿಸಿಕೊಳ್ಳಲಾಗಿದೆ.
ಸಂದರ್ಭ:– ನವರಾತ್ರಿಯ ನವಧಾತ್ರಿಯ ಈ ಶಾಮಲ ವರ್ಣದ ಕಡಲಿನಲ್ಲೂ ಕವಿಯ ಆತ್ಮ ಹಸುರಾಯಿತು. ರಸಪಾನದಲ್ಲಿ ಮಿಂದಿತು, ಎಂದು ಪ್ರಕೃತಿಯಲ್ಲಿ ವ್ಯಾಪಿಸಿರುವ ಹಸುರಿನ ಬಗ್ಗೆ ವಣಿಸುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳಿದ್ದಾರೆ.
ಸ್ವಾರಸ್ಯ:– ನವರಾತ್ರಿಯ ಕಪ್ಪು ಕಡಲಿನಲ್ಲೂ ಹಸುರನ್ನು ಕಾಣುವ ಕುವೆಂಪು ಅವರ ಕವಿಯಾತ್ಮದ ಪ್ರಕೃತಿಯ ರಸಸ್ವಾದನೆ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

38. “ಜಾನಕಿಯ ಮಗನಿದಕೆ ಬೆದರುವನೆ”
ಆಯ್ಕೆ:– ಈ ವಾಕ್ಯವನ್ನು ‘ಲಕ್ಷ್ಮೀಷ ಕವಿ’ ಬರೆದಿರುವ ‘ಜೈಮಿನಿ ಭಾರತ’ ಕಾವ್ಯದಿಂದ ಆಯ್ದ ‘ವೀರಲವ’ ಎಂಬ ಪದ್ಯ ಪಾಠದಿಂದ ಆರಿಸಲಾಗಿದೆ.
ಸಂದರ್ಭ:– ವೀರ ಲವನು ತನ್ನ ಉತ್ತರೀಯ ದಿಂದ ಯಜ್ಞಾಶ್ವವನ್ನು ಬಾಳೆಯ ಗಿಡಕ್ಕೆ ಕಟ್ಟಿ ಹಾಕಿದನು. ಆಗ ಮುನಿ ಪುತ್ರರು ಕುದುರೆಯನ್ನು ಬಿಡು ಎಂದು ಹೇಳುವ ಸಂದರ್ಭದಲ್ಲಿ ಲವನು ಈ ಮಾತನ್ನು ಹೇಳಿದನು.
ಸ್ವಾರಸ್ಯ:– ಸೀತೆಯ ಮಗನಾದ ಲವನ ಧೈರ್ಯವು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**X.** ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ. **1x4=4**

39.

| | |
|---|---|
| ಕಲುಷಿತವಾದೀ ನದೀ ಜಲಗಳಿಗೆ<br>ಮುಂಗಾರಿನ ಮಳೆಯಾಗೋಣ<br>ಬರಡಾಗಿರವೀ ಕಾಡು ಮೇಡುಗಳ<br>ವಸಂತವಾಗುತ ಮುಟ್ಟೋಣ | ಮತಗಳೆಲ್ಲವೂ ಪಥಗಳು ಎನ್ನುವ<br>ಹೊಸ ಎಚ್ಚರದೊಳು ಬದುಕೋಣ<br>ಭಯ ಸಂಶಯದೊಳು ಕಂದಿದ ಕಣ್ಣೊಳು<br>ನಾಳಿನ ಕನಸನು ಬಿತ್ತೋಣ |

**XI.** ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕ ವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶವನ್ನು ಬರೆಯಿರಿ. **1x4=4**

**40.** ರಾಜ್ಯದ ಸಾಮ್ರಾಜ್ಯದ ತೆನೆ ಒಕ್ಕಿ
ಮಂಡಲ–ಗಿಂಡಲಗಳ ಗಡ ಮುಕ್ಕಿ
ತೇಲಿಸಿ ಮುಳುಗಿಸಿ ಖಂಡ–ಖಂಡಗಳ
ಸಾರ್ವಭೌಮರಾ ನೆತ್ತಿಯ ಕುಕ್ಕಿ
ಹಕ್ಕಿ ಹಾರುತಿದೆ ನೋಡಿದಿರಾ?

ಆಯ್ಕೆ:– ಈ ವಾಕ್ಯವನ್ನು ದ.ರಾ ಬೆಂದ್ರೆಯವರು ಬರೆದಿರುವ ಗರಿ ಕನನ ಸಂಕಲನದಿಂದ ಆಯ್ದ ಹಕ್ಕಿ ಹಾರುತ್ತಿದೆ ನೋಡಿದಿರಾ ಪದ್ಯ ಭಾಗದಿಂದ ಆರಿಸಲಾಗಿದೆ ಬರೆದಿರುವ ಸಂಕಲ್ಪಗೀತೆ ಎಂಬ ಪದ್ಯಭಾಗದಿಂದ ಆರಿಸಲಾಗಿದೆ.

ಸಾರಾಂಶ:– ಕಾಲ ಪಕ್ಷಿಯು ತನ್ನ ಪಯಣದಲ್ಲಿ ಅನೇಕ ಸಣ್ಣ ಸಣ್ಣ ರಾಜಮನೆತನಗಳನ್ನು ಹಾಗು ದೊಡ್ಡದೊಡ್ಡ ಸಾಮ್ರಾಜ್ಯಗಳನ್ನು ಹುಟ್ಟಿಸಿ ಬೆಳೆಸಿ ಅವುಗಳ ಪಲಿತವನ್ನು ಕೊಯ್ಲು ಮಾಡಿದೆ. ಅದೇ ರೀತಿಯಲ್ಲಿ ಅನೇಕ ರಾಜ್ಯ, ಸಾಮ್ರಾಜ್ಯ ಕೋಟೆ ಕೊತ್ತಲಗಳನ್ನು ನಾಶಗೊಳಿಸಿದೆ. ವಿಶ್ವದ ಎಲ್ಲಾ ಭಾಗಗಳನ್ನು ಒಂದು ಸಲ ವೈಭವದಿಂದ ಮೆರೆಯುವಂತೆಮಾಡಿದ್ದು ಮತ್ತೊಂದು ಸಲ ಮಳುಗುವಂತೆ ಮಾಡಿದೆ. ಸಾರ್ವಭೌಮರೆಂದು ಮೆರೆದವರ ನೆತ್ತಿಯ ಮೇಲೆ ಕುಕ್ಕಿ ಕೆಳಗೆ ಬೀಳಿಸಿ ಹೊಸಕಿ ಹಾಕಿ ಹಕ್ಕಿ ಹಾರಿಹೋಗಿದೆ ಎಂದು ಕವಿಗಳು ವರ್ಣಿಸಿದ್ದಾರೆ.

ಮೌಲ್ಯ:– ಕವಿಗಳು ಈ ಪದ್ಯಈ ಚರಣದಲ್ಲಿ ಕಾಲಚಕ್ರದಲ್ಲಿ ನಡೆದಿರುವ ಭೂಮಂಡಲದ ರಾಜಕೀಯ ಹಾಗು ಪ್ರಾಕರತಿಕ ಬದಲಾವಣೆಯನ್ನು ವರ್ಣಿಸಿದ್ದಾರೆ.

**XII.** ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ. **2x4=8**

**41. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು ಸಂಸ್ಥಾನವು ಅಭಿವೃದ್ಧಿ ಹೊಂದಿದ ಬಗ್ಗೆ ವಿವರಿಸಿ.**

1902ರ ಆಗಸ್ಟ್ 8ನೇ ತಾರೀಖಿನಿಂದ ಮೈಸೂರು ರಾಜ್ಯದ ನೇರ ಉಸ್ತುವಾರಿ ನಾಲ್ವಡಿಯವರ ಸುಪರ್ದಿಗೆ ಬಂದಿತು. ಆಗ ದಿವಾನರಾಗಿದ್ದ ಸರ್ ಕೆ ಶೇಷಾದ್ರಿ ಅಯ್ಯರ್‌ರವರ ಸಹಕಾರದೊಡನೆ ಮೈಸೂರು ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ಕಂಕಣಬದ್ಧರಾದರು. ಇವರ ಕಾಲದಲ್ಲಿ ಇಡೀ ಭರತಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡಿತು ಆದ್ದರಿಂದ ಮೈಸೂರು ರಾಜ್ಯಕ್ಕೆ ಮಾದರಿ ಮೈಸೂರು ಎಂಬ ಕೀರ್ತಿ ಪ್ರಾಪ್ತವಾಯಿತು. ನಾಲ್ವಡಿ ಕೃಷ್ಣರಾಜ ಒಡೆಯರು ಅರಸು ಮನೆತನದಿಂದ ಬಂದವರಾಗಿದ್ದರೂ ಸಹ ಜನತೆಯ ಆಡಳಿತದಲ್ಲಿ ಪಾಲ್ಗೊಳ್ಳುವಿಕೆಯ ಪರವಾಗಿದ್ದರು.

ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

ವಿಶ್ವೇಶ್ವರಯ್ಯ ಅವರು ಮೈಸೂರಿನ ದಿವಾನರಾದ ನಂತರ ಕಛೇರಿ ಕೆಲಸಗಳಲ್ಲಿ ಸುಧಾರಣೆ ತಂದರು. ಆಡಳಿತದಲ್ಲಿ ದಕ್ಷತೆ ಮತ್ತು ಪ್ರಾಮಾಣಿಕತೆಗೆ ಒತ್ತು ನೀಡಿದರು. ನ್ಯಾಯಾಂಗ ಮತ್ತು ಕಾರ್ಯಾಂಗಗಳಿಗೆ ಸ್ವತಂತ್ರ ಅಸ್ತಿತ್ವ ನೀಡಿದರು. ಸಮರ್ಥ ಕಾರ್ಯ ನಿರ್ವಹಣೆಗಾಗಿ ಸಮಿತಿಗಳನ್ನು ರಚಿಸಿದರು. ನೇಮಕಾತಿಯಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಿದರು. ಭಾಷೆ, ಸಾಹಿತ್ಯ ಮತ್ತು ಸಂಶೋಧನೆಗಳಿಗೆ ಪ್ರೋತ್ಸಾಹ ನೀಡಿದರು. ಕೈಗಾರಿಕೆಗೆ ಅಗ್ರ ಪ್ರಾಶಸ್ತ್ಯ ನೀಡಿದರು. ಆರ್ಥಿಕ ಚಟುವಟಿಕೆಯಲ್ಲಿ ಭದ್ರ ಬುನಾದಿ ಹಾಕುವ ಉದ್ದೇಶದಿಂದ ಹಣಕಾಸು ನೀತಿಯಲ್ಲಿ ಮಾರ್ಪಾಡು ಮಾಡಿದರು.

**42. ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು?**

ರಾಮನು ಬಂದು ತನ್ನ ಆಶ್ರಮದಲ್ಲಿ ನಿಂತಿರುವುದನ್ನು ನೋಡಿ ಶಬರಿ ಆಶ್ಚರ್ಯಪಟ್ಟಳು.ರಾಮನ ಹತ್ತಿರ ಬಂದು ಅವನನ್ನು ಮುಟ್ಟಿ, ಪಾದಕ್ಕೆ ನಮಸ್ಕರಿಸಿ, ಕೈಯನ್ನು ಕಣ್ಣಿಗೆ ಒತ್ತಿಕೊಂಡು ಕಣ್ಣೀರು ಸುರಿಸಿದಳು.ಗದ್ಗದ ಸ್ವರದಿಂದ

ಬನ್ನಿರಿ ಎಂದು ಆಹ್ವಾನಿಸಿದಳು.ಸಿದ್ಧತೆಯೇ ಇಲ್ಲವಲ್ಲ ಎಂದು ಹಂಬಲಿಸಿದಳು.ಮನಸ್ಸಿನ ಬಯಕೆಯಂತೆ ಬಗೆಬಗೆಯ ಕಂಪು ಇರುವ ವನಮಾಲೆಯನ್ನು ರಾಮನ ಕೊರಳಿಗೆ ಹಾಕಿ ಹಿಗ್ಗಿದಳು.ಜಗತ್ತಿನಲ್ಲಿ ಇಂತಹ ರುಚಿಕರವಾದ ಹಣ್ಣೇ ಇಲ್ಲವೆಂದು ಹೇಳುತ್ತ, ನಿಮಗಾಗಿ ತಂದಿದ್ದೇನೆಂದು ತಿಳಿಸಿ ರಾಮನ ಕೈಗೆ ಇತ್ತಳು. ಶಬರಿಯ ಸೇವೆಯಿಂದ ರಾಮನು ಸುಪ್ರಸನ್ನನಾದನು.ರಾಮಲಕ್ಷ್ಮಣರು ಧನ್ಯತಾಭಾವದಿಂದ ಮಂದಹಾಸ ಬೀರಿದರು.ಹೀಗೆ ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ವರ್ಣಿತವಾಗಿದೆ.

ಅಥವಾ

ತನ್ನ ಜನ್ಮವೃತ್ತಾಂತವನ್ನು ಕೇಳಿ ಕರ್ಣನ ಮನಸ್ಸಿನಲ್ಲಿ ಉಂಟಾದ ಭಾವನೆಗಳನ್ನು ವಿವರಿಸಿ.

ಪಾಂಡವರು ಸೋದರರೆಂದು ತಿಳಿದಾಗ ಕರ್ಣನ ಕಂಠ ಬಿಗಿಯಿತು. ಕಣ್ಣೀರು ಹರಿಯಿತು. ದುಃಖಗೊಂಡು ಮನದಲ್ಲೇ ಚಿಂತಿಸುತ್ತಾ 'ಅಯ್ಯೋ ದುರ್ಯೋಧನನಿಗೆ ಕೇಡಾಯಿತು" ಎನ್ನುತ್ತಾನೆ. ನನ್ನನ್ನು ಕಾಪಾಡಿದ ದುರ್ಯೋಧನನಿಗೆ ಶತ್ರುಗಳ ಶಿರವನ್ನು ಕಡಿದು ತಂದೊಪ್ಪಿಸುವ ಆವೇಶದಲ್ಲಿದ್ದೆ. ಆದರೆ ಕೃಷ್ಣನು ನನ್ನ ಜನ್ಮ ರಹಸ್ಯ ತಿಳಿಸಿ ದುರ್ಯೋಧನನನ್ನು ಕೊಂದನು ಎಂದು ಚಿಂತಿಸುತ್ತಾನೆ. ಪಾಂಡವರಿಗೆ ಗೆಲುವು ಕೌರವರಿಗೆ ಸೋಲು ಎಂಬ ತೀರ್ಮಾನಕ್ಕೆ ಬರುತ್ತಾನೆ. ಇದು ಕರ್ಣನ ಮನಸ್ಥಿತಿ ಶೋಚನೀಯವಾಗಿತ್ತು. ಎಂಬುದನ್ನು ಸೂಚಿಸುತ್ತದೆ.

**XIII.** ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ **1x4=4[2+2]**

43. ಮೂರನೆಯ ಸಹಸ್ರಮಾನ ಆರಂಭ. ಇತಿಹಾಸದ ಪುಟಗಳನ್ನು ಗಮನಿಸಿದರೆ ಮೊದಲೆರಡು ಸಹಸ್ರಮಾನಗಳು ಭಾರತದ ನೆಲದಲ್ಲಿ ತೀವ್ರ ಸಂಘರ್ಷದ ನಲೆಯಾಗಿದ್ದನ್ನು ಕಾಣಬಹುದು. ಮೊದಲ ಸಹಸ್ರಮಾನ ದೇಶೀ ಒಳಜಗಳ, ಘರ್ಷಣೆಗಳ ನೆಲೆಯಾಗಿದ್ದರೆ, ಎರಡನೆಯ ಸಹಸ್ರಮಾನ ವಿದೇಶಿ ಆಕ್ರಮಣ, ಅತಿಕ್ರಮಣಗಳ ರಕ್ತದೋಕುಳಿಯ ನರ್ತನಾಲಯ. ಇವೆರಡೂ ಸಹಸ್ರಮಾನಗಳ ಆಂತರಿಕ ಒಳಜಗಳ ಮತ್ತು ವಿದೇಶಿ ತಂಟೆ. ಮೂರನೆಯ ಸಹಸ್ರಮಾನಕ್ಕೆ ಕಾಣಿಕೆಯಾಗಿ ಅಡಿಯಿಟ್ಟಿದೆ. ಯುದ್ಧವು ಇತಿಹಾಸದುದ್ದಕ್ಕೂ ತನ್ನ ಇರುವಿಕೆಯನ್ನು ತೋರಿಸುತ್ತಾ ಬಂದಿದೆ. ಯಾವುದೇ ಸಾಮ್ರಾಜ್ಯದ ಏಳುಬೀಳುಗಳಲ್ಲಿ ಅದು ಪ್ರಮುಖ ಪಾತ್ರ ವಹಿಸಿದೆ. ಯುದ್ಧ ನಡೆಯಲು ಕಾರಣಗಳು ಹಲವು. ಸಾಮ್ರಾಜ್ಯ ವಿಸ್ತರಣೆ, ಲೋಭ, ವೀರತೆಯ ಪ್ರದರ್ಶನ ಒಂದು ಕಡೆಯಾದರೆ, ಕುಟುಂಬ ಕಲಹಗಳೂ ಯುದ್ಧಕ್ಕೆ ನಾಂದಿ ಹಾಡಿದ ಘಟನೆಗಳು ದಾಖಲಾಗಿವೆ. ಸುಮಾರು ಐದು ಸಾವಿರ ವರ್ಷಗಳ ಹಿಂದೆ ನಡೆದ ಕುರುಕ್ಷೇತ್ರ ಯುದ್ಧ ಇದಕ್ಕೆ ಸ್ಪಷ್ಟ ನಿದರ್ಶನ. ಕುರುವಂಶದ ರಾಜಕುಮಾರರ ಅಂತಃಕಲಹ ಐವತ್ತು ಲಕ್ಷ ಜನರ ಪ್ರಾಣಹಾನಿಯೊಂದಿಗೆ ಪರ್ಯವಸಾನವಾಯಿತು. ಐತಿಹ್ಯದಂತೆ ಕೇವಲ ಹದಿನೆಂಟು ದಿನ ನಡೆದ ಈ ಯುದ್ಧ ಕಂಡ ಪರಿಣಾಮ ಅತ್ಯಂತ ಘೋರ.

ಪ್ರಶ್ನೆಗಳು :–ಅ).ಮೂರನೆಯ ಸಹಸ್ರಮಾನದಲ್ಲಿ ಯಾವ ಯುದ್ಧದ ಸಾಧ್ಯತೆ ಹೆಚ್ಚು?

ಮೂರನೆಯ ಸಹಸ್ರಮಾನಕ್ಕೆ ಕಾಣಿಕೆಯಾಗಿ ಅಡಿಯಿಟ್ಟಿದೆ. ಯುದ್ಧವು ಇತಿಹಾಸದುದ್ದಕ್ಕೂ ತನ್ನ ಇರುವಿಕೆಯನ್ನು ತೋರಿಸುತ್ತಾ ಬಂದಿದೆ. ಯಾವುದೇ ಸಾಮ್ರಾಜ್ಯದ ಏಳುಬೀಳುಗಳಲ್ಲಿ ಅದು ಪ್ರಮುಖ ಪಾತ್ರ ವಹಿಸಿದೆ.

ಆ) ಯುದ್ಧಕ್ಕೆ ಕಾರಣಗಳು ಯಾವುವು?

ಯುದ್ಧ ನಡೆಯಲು ಕಾರಣಗಳು ಹಲವು. ಸಾಮ್ರಾಜ್ಯ ವಿಸ್ತರಣೆ, ಲೋಭ, ವೀರತೆಯ ಪ್ರದರ್ಶನ ಒಂದು ಕಡೆಯಾದರೆ, ಕುಟುಂಬ ಕಲಹಗಳೂ ಯುದ್ಧಕ್ಕೆ ನಾಂದಿ ಹಾಡಿದ ಘಟನೆಗಳು ದಾಖಲಾಗಿವೆ

**XIV.** ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ. **1x5=5**

44. ನಿಮ್ಮನ್ನು ಬಾಗಲಕೋಟೆಯ ಉದಯರವಿ ಪ್ರೌಢಶಾಲೆಯ 'ವೇದಾಂತ' ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ಆಚರಿಸಿದ 'ಮಕ್ಕಳ ದಿನಾಚರಣೆ' ಕಾರ್ಯಕ್ರಮದ ವರದಿಯನ್ನು ಬರೆದು; ಅದನ್ನು ಪ್ರಕಟಿಸುವಂತೆ ಕೋರಿ; ಬಾಗಲಕೋಟೆ ಶಾಖೆಯ 'ವಿಜಯ ಕರ್ನಾಟಕ' ದಿನಪತ್ರಿಕೆಯ ಸಹಸಂಪಾದಕರಿಗೆ ಮನವಿ ಪತ್ರ ಬರೆಯಿರಿ.

**ವ್ಯವಹಾರಿಕ ಪತ್ರದ ಮಾದರಿ**

ಇಂದ                                                                                    ಸ್ಥಳ :–

        ____________________                                                   ದಿನಾಂಕ:–

        ____________________

ರವರಿಗೆ

        ---------------

        -----------------

        -----------------

ಮಾನ್ಯರೇ,

        ವಿಷಯ :– ---------------------------------------

*******************

        ---------------------------------------------------------

---------------------------------------------------------------

---------------------------------------------------------------

-----------------------------------------------------.

ವಂದನೆಗಳೊಂದಿಗೆ

ಸ್ಥಳ :                                                                          ಇಂತಿ ತಮ್ಮ ನಂಬುಗೆಯ

ದಿನಾಂಕ:

ಹೊರ ವಿಳಾಸ

| ಇಂದ | ರವರಿಗೆ |
|---|---|
| ------------------<br>---------------------- | ------------------<br>-------------------------- |

*********************************************************************************

ಇಂದ                                                                          ಸ್ಥಳ :– ಬಾಗಲಕೋಟೆ

        ವೇದಾಂತ                                                             ದಿನಾಂಕ:–20/01/2024

        ಉದಯರವಿ ಪ್ರೌಢಶಾಲೆ

        ಬಾಗಲಕೋಟೆ

ರವರಿಗೆ

        ಸಂಪಾದಕರು

        ವಿಜಯಕರ್ನಾಟಕ ದಿನಪತ್ರಿಕೆ

        ಬಾಗಲಕೋಟೆ

ಮಾನ್ಯರೇ,

        ವಿಷಯ:– ಮಕ್ಕಳ ದಿನಾಚರಣೆಯ ವರದಿ ಪ್ರಕಟಿಸಲು ಕೋರಿ

*****************

ಈ ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ ತಮ್ಮಲ್ಲಿ ವಿನಂತಿಸಿಕೊಳ್ಳುವುದೇನೆಂದರೆ ನಮ್ಮ ಶಾಲೆಯಲ್ಲಿ ದಿನಾಂಕ 14/11/2023ರಂದು ಮಕ್ಕಳ ದಿನಾಚರಣೆಯ ಕಾರ್ಯಕ್ರಮವನ್ನು ನೆರವೇರಿಸಿದ್ದು ಈ ಪ್ರಯುಕ್ತ ಮಕ್ಕಳಿಂದ ವಿವಿಧ ಸಾಂಸ್ಕರತಿಕ ಕಾರ್ಯಕ್ರಮಗಳನ್ನು ನಡೆಸಿ ವಿಜೇತರಾದವರಿಗೆ ಬಹುಮಾನಗಳನ್ನು ನೀಡಲಾಯಿತು. ಮಕ್ಕಳಿಗೆ ಮಕ್ಕಳ ದಿನಾರಣೆಯ ಮಹತ್ವವನ್ನು ತಿಳಿಸಲಾಯಿತು.

ವಂದನೆಗಳೊಂದಿಗೆ

ಇಂತಿ ತಮ್ಮ ನಂಬುಗೆಯ
(ವೇದಾಂತ)

ಹೊರ ವಿಳಾಸ

| | |
|---|---|
| ಇಂದ<br>ವೇದಾಂತ<br>ಉದಯರವಿ ಪ್ರೌಢಶಾಲೆ<br>ಬಾಗಲಕೋಟೆ | ರವರಿಗೆ<br>ಸಂಪಾದಕರು<br>ವಿಜಯಕರ್ನಾಟಕ ದಿನಪತ್ರಿಕೆ<br>ಬಾಗಲಕೋಟೆ |

ಅಥವಾ

ನಿಮ್ಮನ್ನು ಬಾಗಲಕೋಟೆಯ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ 'ನೂತನ' ಎಂದು ಭಾವಿಸಿಕೊಂಡು ಮೈಸೂರಿನಲ್ಲಿರುವ ನಿಮ್ಮ ತಂದೆಯವರಿಗೆ ನಿಮ್ಮ ಪರೀಕ್ಷಾ ಸಿದ್ಧತೆಯನ್ನು ಕುರಿತು ಪತ್ರ ಬರೆಯಿರಿ.

**XV.** ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ. **1x5=5**

45. ಗ್ರಂಥಾಲಯಗಳ ಮಹತ್ವ ಅಥವಾ ಬಾಲಕಾರ್ಮಿಕ ಪದ್ಧತಿ

ಗ್ರಂಥಾಲಯಗಳ ಮಹತ್ವ

ಪೀಠಿಕೆ :–"ಗ್ರಂಥಗಳಿಲ್ಲದ ಕೋಣೆ ಆತ್ಮವಿಲ್ಲದ ದೇಹವಿದ್ದಂತೆ" ನಾಣ್ಣುಡಿಯಂತೆ ಪ್ರತಿಯೊಬ್ಬರು ಗ್ರಂಥಗಳನ್ನು ಹೊಂದಿ ತಮ್ಮಲ್ಲಿ ಆತ್ಮವನ್ನು ಇಟ್ಟುಕೊಳ್ಳಬೇಕು. ಇಂದಿನ ಯುಗದಲ್ಲಿ ಜ್ಞಾನಭಿವೃದ್ಧಿಗೆ ಮತ್ತು ಅಮೂಲ್ಯವಾದ ಸಮಯ ಸದುಪಯೋಗಕ್ಕೆ ಗ್ರಂಥಾಲಯಗಳು ಬಹಳ ಮುಖ್ಯ ಎನಿಸುತ್ತವೆ. ಜ್ಞಾನಾರ್ಜನೆಗೆ ಅಗತ್ಯವಾದ ಗ್ರಂಥಗಳಿರುವ ಆಲಯವೇ ಗ್ರಂಥಾಲಯ.ಅದಕ್ಕೆಂದೇ ಶಾಲಾ–ಕಾಲೇಜುಗಳಲ್ಲಿ ಮತ್ತು ಸಾರ್ವಜನಿಕ ಗ್ರಂಥಾಲಯಗಳು ತೆರೆಯಲ್ಪಟ್ಟಿವೆ.

ವಿಷಯ ನಿರೂಪಣೆ :– ಮಾನವನ ಜೀವನದಲ್ಲಿ ಪುಸ್ತಕಗಳು ಪ್ರಮುಖ ಪಾತ್ರ ವಹಿಸುತ್ತವೆ.ಮನುಷ್ಯನ ದೇಹಕ್ಕೆ ಅನ್ನ, ನೀರು, ಗಾಳಿ ಎಷ್ಟು ಮುಖ್ಯವೋ ಹಾಗೆಯೇ ಮಾನವನ ಮನಸ್ಸಿನ ವಿಕಾಸಕ್ಕೆಪುಸ್ತಕಗಳು ಅವಶ್ಯಕವಾಗಿರುತ್ತವೆ. ಪುಸ್ತಕಗಳು ಆತ್ಮೀಯ ಮಿತ್ರರಿದ್ದಂತೆ ಸದಾ ಒಳ್ಳೆಯ ಯೋಚನೆಗಳಿಗೆ ದಾರಿ ಮಾಡಿಕೊಡುತ್ತವೆ. ಜ್ಞಾನವಿಕಾಸಕ್ಕಾಗಿಯೇ ಸಾರ್ವಜನಿಕವಾಗಿಯು ಮತ್ತು ಶಾಲಾ ಕಾಲೇಜುಗಳಲ್ಲಿ ಗ್ರಂಥಾಲಯಗಳನ್ನು ತೆರೆಯಲಾಗಿದೆ. ಇಲ್ಲಿ ಪ್ರತಿಯೊಂದು ವಿಷಯಗಳ ಅಂದರೆ ಸಾಹಿತ್ಯ, ಇತಿಹಾಸ, ಪುರಾಣ, ವಿಜ್ಞಾನ, ತಂತ್ರಜ್ಞಾನ, ಮಕ್ಕಳ ಸಾಹಿತ್ಯ, ಮೊದಲಾದ ವಿಷಯಗಳ ಗ್ರಂಥಗಳನ್ನು ಇಟ್ಟಿರುತ್ತಾರೆ. ಗ್ರಂಥಾಲಯಗಳು ಜ್ಞಾನದ ನಿಧಿಗಳಿದ್ದಂತೆ ಅಂತಹ ಜ್ಞಾನ ನಿಧಿಗೆ ಕೈ ಹಾಕಿ ನಮ್ಮ ವ್ಯಕ್ತಿತ್ವ ವಿಕಸನ ಮಾಡಿಕೊಳ್ಳಬೇಕು. ಓದುವ ಹವ್ಯಾಸವುಳ್ಳವುಳ್ಳವರು ಗ್ರಂಥಾಲಯಗಳನ್ನು ದೇವಾಲಯದಂತೆ ಕಾಣುತ್ತಾರೆ. ಉನ್ನತ ವಿದ್ಯಾಭ್ಯಾಸವನ್ನು ಮಾಡುವ ವಿದ್ಯಾರ್ಥಿಗಳಿಗಂತೂ ಜ್ಞಾನದಾಸೋಹದ ಮನೆಗಳಿದ್ದಂತೆ. ಅಲ್ಲಿ ಜ್ಞಾನವೆಂಬ ಆಹಾರ ಸೇವಿಸುವವರಿಗೆ ಅದರ ರುಚಿ ಅರಿವಾಗುತ್ತದೆ. ಇಂದಿನ ತಂತ್ರಜ್ಞಾನ ಯುಗದಲ್ಲಿ ಅಂತರ್ಜಾಲದ ಮೂಲಕ ಜ್ಞಾನವನ್ನು

ಗಳಿಸಿಕೊಳ್ಳಬಹುದು.ಅದಕ್ಕೆಂದೇ ಇ–ಲೈಬ್ರರಿಗಳನ್ನು ತೆರೆಯಲಾಗಿದೆ. ಎಲ್ಲ ಪುಸ್ತಕಗಳನ್ನು ಅಂತರ್ಜಾಲಕ್ಕೆ ಸೇರಿಸಲಾಗುತ್ತಿದೆ.

**ಉಪಸಂಹಾರ:–** ಒಟ್ಟಾರೆಯಾಗಿ ಜೀವನದ ನಿಜವಾದ ಮೌಲ್ಯ ಮತ್ತು ಸಾರ್ಥಕತೆಯನ್ನು ತಿಳಿಸಿಕೊಡುವಲ್ಲಿ, ಜೀವನದ ಬಗೆಗೆ ಭರವಸೆಯನ್ನು ತುಂಬುವಲ್ಲಿ ಮತ್ತು ಚಾರಿತ್ರ್ಯವನ್ನು ನಿರ್ವಹಿಸುವಲ್ಲಿ ಪುಸ್ತಕಗಳ ಪಾತ್ರ ಹಿರಿದು. ಇಂತಹ ಪುಸ್ತಕಗಳನ್ನೊಳಗೊಂಡ ಗ್ರಂಥಾಲಯದ ಸದ್ಬಳಕೆಯಿಂದ ಸ್ವಯಂ ವ್ಯಕ್ತಿತ್ವ ವಿಕಾಸ ಹಾಗೂ ಶೈಕ್ಷಣಿಕ ಪ್ರಕ್ರಿಯೆಗಳ ಉತ್ತಮ ನಿರ್ವಹಣೆ ಸಾಧ್ಯವಾಗುತ್ತದೆ. ಆದ್ದರಿಂದ ಗ್ರಂಥಾಲಯಗಳನ್ನು ಅಭಿವೃದ್ಧಿಪಡಿಸಿ ಕಾಲಕಾಲಕ್ಕೆ ಅದನ್ನು ವಾಸ್ತವಿಕ ನೆಲೆಗಟ್ಟಿಗೆ ತಕ್ಕಂತೆ ವಿಸ್ತೃತಗೊಳಿಸುವುದು ನಮ್ಮ ಕರ್ತವ್ಯವಾಗಬೇಕು.

*************************